# ಪ್ರಕಟಣೆ

## ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು

### ಮಾಹಿತಿ ಹಕ್ಕು ಅಧಿನಿಯಮ 2005 ರ ಸೆಕ್ಷನ್ 4(1) (ಎ) ರಡಿ ಸಾರ್ವಜನಿಕರಿಗೆ ಮಾಹಿತಿ:

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ, ಹಿಂದುಳಿದ ವರ್ಗಗಳಿಗೆ ಸೇರಿದ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು/ಕಾಲೇಜುಗಳು, ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳು, ಅಟಲ್ ಬಿಹಾರಿ ವಾಜಪೇಯಿ ವಸತಿ ಶಾಲೆಗಳು, ಶ್ರೀಮತಿ ಇಂದಿರಾಗಾಂದಿ ವಸತಿ ಶಾಲೆಗಳು, ಮಾಸ್ತಿ ವೆಂಕಟೇಶ ಐಯ್ಯಂಗಾರ್ ವಸತಿ ಶಾಲೆಗಳು, ಡಾ||ಬಿ.ಆರ್.ಅಂಬೇಡ್ಕರ್ ವಸತಿ ಶಾಲೆಗಳು, ಏಕಲವ್ಯ ಮಾದರಿ ವಸತಿ ಶಾಲೆಗಳು ಒಟ್ಟು 826 ವಸತಿ ಶಾಲೆಗಳು/ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ.

ರಾಜ್ಯ ಮಟ್ಟದಲ್ಲಿ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಯ ಸಂಘದ ಕೇಂದ್ರ ಕಛೇರಿಯಲ್ಲಿ ಕಾರ್ಯನಿರ್ವಾಹಕ ನಿರ್ದೇಶಕರು ಸಂಘದ ಮುಖ್ಯಸ್ಥರಾಗಿದ್ದು, ಸಂಘದ ಅಧಿಕಾರಿಗಳು/ ಸಿಬ್ಬಂದಿಗಳು ಸಂಘದ ಆಡಳಿತ ಮಂಡಳಿ ತೀರ್ಮಾನಗಳು ಹಾಗೂ ಸರ್ಕಾರಿ ನಿಯಮಗಳನ್ವಯ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

ರಾಜ್ಯದಲ್ಲಿ ವಿವಿಧ ವರ್ಗಗಳ ಗ್ರಾಮೀಣ ಪ್ರದೇಶದ ಪ್ರತಿಭಾವಂತ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗಾಗಿ ವಸತಿ ಶಾಲೆಗಳನ್ನು ಪ್ರಾರಂಭಿಸಲಾಗಿದೆ. ಎಲ್ಲಾ ವರ್ಗಗಳ ವಸತಿ ಶಾಲೆಗಳನ್ನು ಒಂದೇ ಸಂಸ್ಥೆಯ ಕಾರ್ಯವ್ಯಾಪ್ತಿಗೆ ಒಳಪಡಿಸಿ ಮಕ್ಕಳಿಗೆ ಗುಣಾತ್ಮಕ ಶಿಕ್ಷಣ ನೀಡುವ ಉದ್ದೇಶದಿಂದ ರಾಜ್ಯ ಸರ್ಕಾರವು ಸಮಾಜ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ **'ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ'ವನ್ನು** 1999-2000ನೇ ಸಾಲಿನಲ್ಲಿ ಸ್ಥಾಪನೆ ಮಾಡಲಾಗಿದೆ.